**ಎಂ ವಿ ಸಿ 70/2025 ಪಿಡಬ್ಲ್ಯೂ 1**

**ಸಾಕ್ಷಿಯನ್ನು ದಿ: 10.02.2026 ರಂದು ಕರೆಯಿಸಿ ಪ್ರಮಾಣವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 2 ನೇ ಎದುರುದಾರರ ಪರ ಶ್ರೀ ಎನ್ ಪಿ ವಕೀಲರ ಪರವಾಗಿ ಶ್ರೀಮತಿ ಸಿ ಟಿ ಕೆ ವಕೀಲರಿಂದಃ**

ನಾನು ಎಸ್ ಎಸ್ ಎಲ್ ಸಿ ವರೆಗೆ ಓದಿದ್ದೇನೆ. ನಾನು ಅಪಘಾತ ನಡೆದ ದಿನ 3 ಹಸುಗಳನ್ನು ಹಿಡಿದುಕೊಂಡು ಹೋಗುತ್ತಿದ್ದೆ. ಬಜಾಜ್ ಪಲ್ಸರ್ ಚಾಲಕ ಬರುತ್ತಿದ್ದುದ್ದನ್ನು ನಾನು ಗಮನಿಸಲಿಲ್ಲ. ಆ ವಾಹನದ ಬಣ್ಣ ಕೆಂಪಾಗಿದ್ದು ಅದರ ನೋಂದಣಿ ಸಂಖ್ಯೆ ನನಗೆ ಗೊತ್ತಿಲ್ಲ. ಅಂದು ನಾನೊಬ್ಬಳೇ ಹೋಗುತ್ತಿದ್ದೆ. ನನ್ನ ಜೊತೆಯಲ್ಲಿ ಯಾರು ಇರಲಿಲ್ಲ. ಅಪಘಾತವು ದಿನಾಂಕ 19.07.2024 ರಂದು ಸಂಭವಿಸಿದ್ದು ದೂರನ್ನು ದಿನಾಂಕ 21.07.2024 ರಂದು ನೀಡಿದ್ದೇನೆ ಎಂದರೆ ಸರಿ. ಹಸುಗಳನ್ನು ನಾನೇ ಅಡ್ಡಾದಿಡ್ಡಿಯಾಗಿ ನಡೆಸಿಕೊಂಡು ಹೋಗಿ ಅಪಘಾತಪಡಿಸಿದ್ದೆನೆಯೇ ಹೊರತು ಆ ಬಜಾಜ್ ಪಲ್ಸರ್ ಚಾಲಕ ಅಪಘಾತಪಡಿಸಿಲ್ಲ ಎಂದರೆ ಸರಿಯಲ್ಲ.

ಅಪಘಾತ ಆದ ನಂತರ ಮೊದಲು ಪಾಂಡವಪುರದ ಸರ್ಕಾರಿ ಆಸ್ಪತ್ರೆಯಲ್ಲಿ ದಾಖಲಾದೆ. ಅಲ್ಲಿ ಅರ್ಧ ಗಂಟೆ ಇದ್ದು ಆನಂತರ ಐಶ್ವರ್ಯ ಆಸ್ಪತ್ರೆಯಲ್ಲಿ ದಾಖಲಾದೆ. ಐಶ್ವರ್ಯ ಆಸ್ಪತ್ರೆಯಲ್ಲಿ ನನ್ನ ಎಡಗೈ ಶಸ್ತ್ರ ಚಿಕಿತ್ಸೆ ನಡೆಸಿದರು. ಆಸ್ಪತ್ರೆಯಿಂದ ಬಿಡುಗಡೆಯಾದ ನಂತರ ಸುಮಾರು 5-6 ಬಾರಿ ಹೊರರೋಗಿಯಾಗಿ ಚಿಕಿತ್ಸೆ ಪಡೆದುಕೊಂಡಿದ್ದೇನೆ. ಹೊರರೋಗಿಯಾಗಿ ಚಿಕಿತ್ಸೆ ಪಡೆದುಕೊಂಡ ಬಗ್ಗೆ ದಾಖಲೆಗಳನ್ನು ಹಾಜರುಪಡಿಸಿದ್ದೇನೆ. ನಾನು ಆಸ್ಪತ್ರೆಯಲ್ಲಿ ಇದ್ದಾಗ ನನ್ನ ಮನೆಯವರೇ ನೋಡಿಕೊಳ್ಳುತ್ತಿದ್ದರು ಎಂದರೆ ಸರಿ.

ಅಪಘಾತಕ್ಕೂ ಮೊದಲು ಹಸುಗಳನ್ನು ನೋಡಿಕೊಳ್ಳುತಿದ್ದು ಈಗಲೂ ಸಹ ಹಸುಗಳನ್ನು ನೋಡಿಕೊಳ್ಳುತ್ತೇನೆ. ಹಸು ಸಾಕಾಣಿಕೆ ಮೂಲಕ ತಿಂಗಳಿಗೆ 20 ಸಾವಿರ ಸಂಪಾದನೆ ಮಾಡುತ್ತಿದ್ದ ಬಗ್ಗೆ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದೇನೆ.

ನಾನು ಅಂತಹ ಯಾವುದೇ ದಾಖಲೆಗಳನ್ನು ಹಾಜರುಪಡಿಸದೆ ಇದ್ದರೂ ಸಹ ಹೆಚ್ಚಿನ ಪರಿಹಾರ ಸಿಗಲಿ ಎಂದು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಕೆಲಸ ಮಾಡಲು ಯಾವುದೇ ರೀತಿಯ ತೊಂದರೆ ಇಲ್ಲದೆ ಇದ್ದರೂ ಸಹ ಹೆಚ್ಚಿನ ಪರಿಹಾರ ಪಡೆಯಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತವು ನನ್ನ ತಪ್ಪಿನಿಂದಲೇ ಸಂಭವಿಸಿರುವುದರಿಂದ ವಿಮಾ ಕಂಪನಿಯವರು ನನಗೆ ಪರಿಹಾರ ನೀಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ನಾನು ಮತ್ತು ಪೊಲೀಸರು ಷರೀಕ್ಕಾಗಿ ವಿಮಾ ಕಂಪನಿಯವರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿದ್ದೇವೆ ಎಂದರೆ ಸರಿಯಲ್ಲ. ನಾನು ಹಾಜರುಪಡಿಸಿರುವ ಡಿಸ್ ಚಾರ್ಜ ಸಮ್ಮರಿಯಲ್ಲಿ ನನಗೆ ಯಾವುದೇ ರೀತಿಯ ತೊಂದರೆ ಇಲ್ಲ ಎಂದು ನಮೂದು ಮಾಡಿದ್ದಾರೆ ಎಂದರೆ ಸರಿಯಲ್ಲ. ಹೆಚ್ಚಿನ ಪರಿಹಾರ ಪಡೆಯುವ ಸಲುವಾಗಿ ನಾನು ಸುಳ್ಳು ವೈದ್ಯಕೀಯ ವೆಚ್ಚದ ಬಿಲ್ಲುಗಳನ್ನು ಸೃಷ್ಟಿ ಮಾಡಿ ಹಾಜರುಪಡಿಸಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲ.**

**(ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಿಸಿದೆ)**

**ಸಾ ಓ ಹೇ ಸ ಒ**

**(ಬಾಬು ಎನ್)**
**1 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು,**
**ಪಾಂಡವಪುರ**